## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1313 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಎನ್ ರವಿಕುಮಾರ್ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.03.2026 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | KFC ಸೇರಿದಂತೆ ಇನ್ನಿತರ ಸಂಸ್ಥೆಗಳು 100% ಹಲಾಲ್ ಮಾಂಸವನ್ನೇ ಖರೀದಿಸುವ/ಮಾರಾಟ ಮಾಡುವುದಾಗಿ ತಮ್ಮ ಅಂಗಡಿ ಹೋಟೇಲುಗಳಲ್ಲಿ ಸಾರ್ವಜನಿಕವಾಗಿ ಘೋಷಿಸುವ ಮೂಲಕ ಪರಿಶಿಷ್ಟ ಜಾತಿಯ ಮಾಂಸ ಮಾರಾಟಗಾರರ ಬದುಕುವ ಹಕ್ಕನ್ನೇ ಕಸಿದುಕೊಂಡಿರುವ ಕುರಿತು (ಅಟ್ರಾಸಿಟಿ) ಪ್ರಕರಣ ದಾಖಲು ಮಾಡುವ ಬಗ್ಗೆ ಸರಕಾರದ ನಿಲುವೇನು; | ಹಲಾಲ್ ಮಾಂಸ ಖರೀದಿ/ಮಾರಾಟಕ್ಕೆ ಸಂಬಂಧಿಸಿದಂತೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ವ್ಯಾಪ್ತಿಗೆ ಒಳಪಡುವುದಿಲ್ಲ.<br>ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ವತಿಯಿಂದ ರಾಜ್ಯ ವ್ಯಾಪ್ತಿಯ ಆದ್ಯತಾ ಪಡಿತರ ಚೀಟಿಯ (ಬಿಪಿಎಲ್) ಪ್ರತಿ ಸದಸ್ಯರಿಗೆ ರಾಜ್ಯ NFSA ಅಡಿ ಪ್ರತಿ ಮಾಹೆ 5 ಕೆ.ಜಿ ಆಹಾರಧಾನ್ಯವನ್ನು ಹಂಚಿಕೆ ಮಾಡಲಾಗುತ್ತಿದೆ. ರಾಜ್ಯ ಸರ್ಕಾರದಿಂದ ಅನ್ನಭಾಗ್ಯ ಯೋಜನೆಯಡಿ ಪ್ರತಿ ಅರ್ಹ ಫಲಾನುಭವಿಗೆ 05 ಕೆ.ಜಿ ಹೆಚ್ಚುವರಿ ಅಕ್ಕಿಯನ್ನು ವಿತರಿಸಲಾಗುತ್ತಿದೆ. |
| ಆ | ಇತ್ತೀಚಿನ ವರ್ಷಗಳವರೆಗೂ ಅಂತರಾಷ್ಟ್ರೀಯ ಕಂಪನಿಗಳಾದ KFC ಸೇರಿದಂತೆ ಇನ್ನಿತರ ಸಂಸ್ಥೆಗಳು ಗ್ರಾಹಕರಿಗೆ ಸಿದ್ಧಪಡಿಸಲಾದ ಮಾಂಸಾಹಾರ ಪೂರೈಸುವ ಸಮಯದಲ್ಲಿ ಪರಿಶಿಷ್ಟ ಜಾತಿಯ ಮಾಂಸ ಖರೀದಿಸುತ್ತಿದ್ದು ಇದರಿಂದ ಪರಿಶಿಷ್ಟ ಜಾತಿಯವರು ತಮ್ಮ ದೈನಂದಿನ ಜೀವನ ಸಾಗಿಸುತ್ತಿದ್ದುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಸ್ತುತ ಈ ಸಂಸ್ಥೆಗಳ 100% ಹಲಾಲ್ ಮಾಂಸವನ್ನೇ ಖರೀದಿಸುತ್ತಿರುವುದರಿಂದ ಪರಿಶಿಷ್ಟ ಜಾತಿಯ ಮಾರಾಟಗಾರರು ತಮ್ಮ ಉದ್ಯೋಗವನ್ನೇ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು; | ಅನ್ವಯಿಸುವುದಿಲ್ಲ. |

| | | |
|---|---|---|
| ೩ | ಯಾವ ಯಾವ ಸಂಸ್ಥೆಗಳು ಮತ್ತು ಹೋಟೇಲುಗಳು 100% ಹಲಾಲ್ ಮಾಂಸವನ್ನು ಮಾತ್ರವೇ ಮಾರಾಟ ಮಾಡುತ್ತೇವೆ ಎಂಬುದಾಗಿ ಸಾರ್ವಜನಿಕವಾಗಿ ಪ್ರದರ್ಶಿಸಲು ಸರಕಾರದ ಅನುಮತಿ ಪಡೆದಿರುವರೇ; ಈ ಕುರಿತು ಸರಕಾರದ ನಿಲುವೇನು? (ವಿವರ ನೀಡುವುದು) | ಅನ್ವಯಿಸುವುದಿಲ್ಲ. |

ಆನಾಸ 32 ಆರ್‌ಪಿಆರ್ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು